## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೆಚ್.ಎಂ.ಎಸ್. ಎಜುಕೇಷನ್ ಸೊಸೈಟಿ (ರಿ), ತುಮಕೂರು ಇವರು ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ:ಔನಿಇ/66/ಯೋಜನೆ/2016-17, ದಿನಾಂಕ:02.01.2017.

***

ಪ್ರಸ್ತಾವನೆ:

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ, ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಅಧ್ಯಕ್ಷರು, ಹೆಚ್.ಎಂ.ಎಸ್. ಎಜುಕೇಷನ್ ಸೊಸೈಟಿ (ರಿ), ತುಮಕೂರು ಇವರ ಮನವಿಯ ಮೇರೆಗೆ ತಮ್ಮ ಕಛೇರಿಯ ಪತ್ರ ದಿನಾಂಕ: 13.07.2016ರ ಸೂಚನೆಯನ್ವಯ ಎಸ್.ಎ. ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಶೆಟ್ಟಿಹಳ್ಳಿ ರಸ್ತೆ, ನೃಪತುಂಗ ಬಡಾವಣೆ, ತುಮಕೂರು ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ ಡಿ.ಫಾರ್ಮ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವುದಕ್ಕೆ ಸಂಬಂಧಿಸಿದಂತೆ, ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯನುಸಾರ ಸದರಿ ಸಂಸ್ಥೆಯು ಡಿ.ಫಾರ್ಮ ಕೋರ್ಸ್ ನಡೆಸಲು ಸೂಕ್ತವಾದ ಕಟ್ಟಡವನ್ನು ಹೊಂದಿದ್ದು, 60 ವಿದ್ಯಾರ್ಥಿಗಳ ಪ್ರಥಮ ಡಿ.ಫಾರ್ಮ ತರಗತಿಗಳನ್ನು ಪ್ರಾರಂಭಿಸಲು ನಿಯಮಾನುಸಾರ ಅಗತ್ಯವಿರುವ ಮೂಲ ಸೌಲಭ್ಯಗಳನ್ನು ಹೊಂದಿದ್ದು, ಇನ್ನಿತರ ಅಗತ್ಯತೆಗಳನ್ನು ಒಳಗೊಂಡಿರುವುದರಿಂದ, ಸೂಕ್ತ ಷರತ್ತುಗಳನ್ನು ವಿಧಿಸಿ, 2017-18ನೇ ಶೈಕ್ಷಣಿಕ ಸಾಲಿನಿಂದ ಡಿ.ಫಾರ್ಮ ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡಬಹುದಾಗಿದೆಯೆಂದು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ.

ಔಷಧ ನಿಯಂತ್ರಕರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಹೆಚ್.ಎಂ.ಎಸ್. ಎಜುಕೇಷನ್ ಸೊಸೈಟಿ (ರಿ), ತುಮಕೂರು ಇವರು ಎಸ್.ಎ.ಕಾಲೇಜ್ ಆಫ್ ಫಾರ್ಮಸಿ ಹೆಸರಿನಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ:ಆಕುಕ 13 ಪಿಟಿಡಿ 2017, ಬೆಂಗಳೂರು, ದಿನಾಂಕ:20.01.2017.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹೆಚ್.ಎಂ.ಎಸ್. ಎಜುಕೇಷನ್ ಸೊಸೈಟಿ (ರಿ), ತುಮಕೂರು ಇವರು ಶೆಟ್ಟಿಹಳ್ಳಿ ರಸ್ತೆ, ನೃಪತುಂಗ ಬಡಾವಣೆ, ತುಮಕೂರು ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ ಎಸ್.ಎ.ಕಾಲೇಜ್ ಆಫ್ ಫಾರ್ಮಸಿ ಹೆಸರಿನಲ್ಲಿ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಡಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಕೋರ್ಸ್ ಪ್ರಾರಂಭಿಸುವ ಮೊದಲು ಹಾಲಿಯಿರುವ ಚಿಕ್ಕಕೊಠಡಿಗಳನ್ನು ನಿಯಮಾನುಸಾರ ವಿಸ್ತರಿಸತಕ್ಕದ್ದು.

PRINCIPAL
S.A. COLLEGE OF PHARMACY
Tumakuru.